ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 231 ಗ್ರಾಪಸ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:01–04–2019.

## ಸುತ್ತೋಲೆ

ವಿಷಯ: PFMS ಹಾಗೂ PRIASoft ತಂತ್ರಾಂಶದನುಸಾರ 14ನೇ ಹಣಕಾಸು ಆಯೋಗ ಅನುದಾನದ ವೆಚ್ಚ ಭರಿಸಲು ಉಳಿತಾಯ ಖಾತೆಗಳನ್ನು ಬದಲಿಸುವ ಕುರಿತು.

ಉಲ್ಲೇಖ: ಜಂಟಿ ನಿರ್ದೇಶಕರು, ಭಾರತ ಸರ್ಕಾರ, MoPR ರವರ ಅರೆ ಸರ್ಕಾರಿ ಪತ್ರ ಸಂಖ್ಯೆ:N-11015/307/2017-FO, ದಿನಾಂಕ: 25–03–2019.

*****

14ನೇ ಹಣಕಾಸಿನ ಅನುದಾನ ಆಯೋಗದ ವೆಚ್ಚವನ್ನು ಭರಿಸಲು PFMS & PRIASoft ತಂತ್ರಾಂಶವನ್ನು ಬಳಸಲು MoPR ರವರು ಕಡ್ಡಾಯಗೊಳಿಸಿರುತ್ತಾರೆ. ಅದರಂತೆ, 4068 ಗ್ರಾಮ ಪಂಚಾಯತಿರವರು PFMS ಮುಖಾಂತರ ವೆಚ್ಚಭರಿಸಲು PRIASoft ತಂತ್ರಾಂಶದಲ್ಲಿ 14ನೇ ಹಣಕಾಸಿನ ಖಾತೆಗಳನ್ನು ನೋಂದಣಿ ಮಾಡಲಾಗಿರುತ್ತದೆ ಹಾಗೂ PRIASoft ತಂತ್ರಾಂಶದ ಬಳಕೆಯನ್ನು ಮಾಡುತ್ತಿದ್ದಾರೆ.

ಉಲ್ಲೇಖಿತ ಪತ್ರದಲ್ಲಿ ನೀಡಿರುವ ನಿರ್ದೇಶನದಂತೆ 44 ಬ್ಯಾಂಕ್‌ಗಳು PFMS ತಂತ್ರಾಂಶದಲ್ಲಿ DSC enabled Payments ಗೆ onboard ಆಗಿದೆ. ಪ್ರಸ್ತುತ PFMS ಮತ್ತು PRIASoft ತಂತ್ರಾಂಶದಲ್ಲಿ ನೋಂದಣಿಯಾಗಿರುವ ಗ್ರಾಮ ಪಂಚಾಯಿತಿಗಳ 14ನೇ ಹಣಕಾಸಿನ ಖಾತೆಗಳು 44 ಬ್ಯಾಂಕ್‌ಗಳನ್ನು ಹೊರತುಪಡಿಸಿ, ಬೇರೆ RRBs, Private Sector ಮತ್ತು Co-operative Bank ಗಳಲ್ಲಿ ಖಾತೆಗಳನ್ನು ನಿರ್ವಹಣೆ ಮಾಡುತ್ತಿದ್ದಲ್ಲಿ PRIASoft ತಂತ್ರಾಂಶದಲ್ಲಿ ವೆಚ್ಚವನ್ನು ಭರಿಸಲು ಸಾಧ್ಯವಾಗುತ್ತಿಲ್ಲವೆಂದು ಸರ್ಕಾರದ ಗಮನಕ್ಕೆ ಬಂದಿದೆ.

DSC enabled Payment ಸೌಲಭ್ಯ ಇಲ್ಲದಿರುವ ಬ್ಯಾಂಕ್‌ಗಳಲ್ಲಿ 14ನೇ ಹಣಕಾಸು ಆಯೋಗ ಖಾತೆಗಳನ್ನು ನಿರ್ವಹಿಸುತ್ತಿರುವ ಗ್ರಾಮ ಪಂಚಾಯಿತಿಗಳು ಉಲ್ಲೇಖಿತ ಪತ್ರದಲ್ಲಿ ತಿಳಿಸಿರುವಂತೆ (ಸದರಿ ಪತ್ರವು DSC enabled ಬ್ಯಾಂಕ್‌ಗಳ ವಿವರಗಳೊಂದಿಗೆ ಈಗಾಗಲೇ ಎಲ್ಲಾ ಜಿಲ್ಲಾ/ ತಾಲ್ಲೂಕು/ ಗ್ರಾಮ ಪಂಚಾಯಿತಿಗಳಿಗೆ ಇ–ಮೇಲ್ ಮೂಲಕ ಕಳುಹಿಸಲಾಗಿದೆ) ನಿಗಧಿಪಡಿಸಿದ 44 ಬ್ಯಾಂಕ್‌ಗಳು ಹಾಗೂ ವಿಜಯ ಬ್ಯಾಂಕ್ ಮತ್ತು ಕಾರ್ಪೋರೇಷನ್ ಬ್ಯಾಂಕ್ ಇವುಗಳಲ್ಲಿ ಯಾವುದಾದರೂ ಒಂದು ಬ್ಯಾಂಕ್‌ಗೆ ಖಾತೆಯನ್ನು ವರ್ಗಾವಣೆ ಮಾಡಿಕೊಳ್ಳುವುದು. 44 ಬ್ಯಾಂಕ್‌ಗಳ ಜೊತೆ ವಿಜಯ ಬ್ಯಾಂಕ್ ಮತ್ತು ಕಾರ್ಪೋರೇಷನ್ ಬ್ಯಾಂಕ್ ಇವುಗಳಲ್ಲಿ ಒಂದು ಬ್ಯಾಂಕ್‌ನಲ್ಲಿ ಖಾತೆಗಳನ್ನು ತೆರೆದ ನಂತರ ಹಳೆಯ ಖಾತೆಯಿಂದ ಹೊಸ ಖಾತೆಗೆ ಹಣ ವರ್ಗಾವಣೆ ಮಾಡಿ, ಹಳೆಯ ಖಾತೆಗಳನ್ನು ಮುಕ್ತಾಯಗೊಳಿಸಿ ಅಲ್ಲಿನ Balance ನ್ನು ಮರುಹೊಂದಾಣಿಕೆ (Reconcile) ಮಾಡಿಸಲು ಈ ಮೂಲಕ ಸೂಚಿಸಿದೆ.

ಹೊಸ ಖಾತೆಗಳನ್ನು ವರ್ಗಾವಣೆ ಮಾಡಿಕೊಂಡ ನಂತರ PFMS ಮತ್ತು ಪಂಚತಂತ್ರ ತಂತ್ರಾಂಶದಲ್ಲಿ ಖಾತೆ ವಿವರಗಳನ್ನು ಅಳವಡಿಸಲು ಈ ಮೂಲಕ ಸೂಚಿಸಿದೆ.

(ಎಸ್.ಎಂ.ಜುಲ್‌ಫಿಖಾರ್‌ಉಲ್ಲಾ)
ನಿರ್ದೇಶಕರು (ಪಂ.ರಾಜ್–2)ಹಾಗೂ
ಸರ್ಕಾರದ ಪದನಿಮಿತ್ತ ಜಂಟಿಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಪ್ರತಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು

2. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
4. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ (ಪಿ.ಬಿ.ನಂ.5329) ಬೆಂಗಳೂರು.
5. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
6. ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಆಯೋಗ ಕೋಶ, ಆರ್ಥಿಕ ಇಲಾಖೆರವರ ಆಪ್ತ ಸಹಾಯಕರು.
7. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಲಲಿತಮಹಲ್ ರಸ್ತೆ, ಮೈಸೂರುರವರ ಆಪ್ತ ಸಹಾಯಕರು.
8. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.

<u>ಪ್ರತಿಯನ್ನು ಮಾಹಿತಿಗಾಗಿ:</u>

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿರವರ ಮಾಹಿತಿಗಾಗಿ.
2. ಸರ್ಕಾರದ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿರವರ ಮಾಹಿತಿಗಾಗಿ.
3. ನಿರ್ದೇಶಕರು (ಪಂ.ರಾಜ್-1 ಮತ್ತು 2) ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಸಹಾಯಕರು.
4. ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
5. ವೆಬ್ ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.